# ಕರ್ನಾಟಕ ವಿಧಾನಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 243
2. ವಿಧಾನ ಪರಿಷತ್ತು ಸದಸ್ಯರ ಹೆಸರು : ಶ್ರೀ ಮುನಿರಾಜು ಗೌಡ ಪಿ.ಎಂ
3. ಉತ್ತರಿಸುವ ದಿನಾಂಕ : 14.12.2021
4. ಉತ್ತರಿಸುವ ಸಚಿವರು : ಕಾರ್ಮಿಕ ಸಚಿವರು

| ಕ್ರ ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ | ರಾಜ್ಯದಲ್ಲಿ ಬಾಲಕಾರ್ಮಿಕ ಸಮೀಕ್ಷೆಯನ್ನು ಎಷ್ಟು ವರ್ಷಕೊಮ್ಮೆ ನಡೆಸಲಾಗುತ್ತಿದೆ: | ರಾಜ್ಯದಲ್ಲಿ ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ ಸಮೀಕ್ಷೆಯನ್ನು ನಾಲ್ಕು ವರ್ಷಗಳಿಗೊಮ್ಮೆ ನಡೆಸಲಾಗುತ್ತಿದೆ. |
| ಆ | ರಾಜ್ಯದಲ್ಲಿ ಕೊನೆಯದಾಗಿ ಯಾವ ಸಾಲಿನಲ್ಲಿ ಬಾಲಕಾರ್ಮಿಕರ ಸಮೀಕ್ಷೆಯನ್ನು ನಡೆಸಲಾಗಿದೆ; ಆ ಸಂದರ್ಭದಲ್ಲಿ ಎಷ್ಟು ಜನ ಬಾಲಕಾರ್ಮಿಕರನ್ನು ಗುರುತಿಸಿ ರಕ್ಷಣೆ ಮಾಡಲಾಗಿರುವ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು) | ರಾಜ್ಯದಲ್ಲಿ 2016-17 ಮತ್ತು 2017-18ನೇ ಸಾಲುಗಳಲ್ಲಿ ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರ ಸಮೀಕ್ಷೆಯನ್ನು ನಡೆಸಲಾಗಿರುತ್ತದೆ. ಸದರಿ ಸಮೀಕ್ಷೆಯ ಸಂದರ್ಭದಲ್ಲಿ 22,882 ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರನ್ನು ಗುರುತಿಸಲಾಗಿರುತ್ತದೆ. ಜಿಲ್ಲಾವಾರು ಮಾಹಿತಿಯನ್ನು **ಅನುಬಂಧ-1**ರಲ್ಲಿ ಒದಗಿಸಿದೆ.<br><br>ಸದರಿ ಸಮೀಕ್ಷೆಯ ನಂತರ ಕೆಲಸದಲ್ಲಿ ತೊಡಗಿದ್ದ 560 ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕರನ್ನು ರಕ್ಷಣೆ ಮಾಡಿ ಅವರನ್ನು ಪುನರ್ವಸತಿಗೊಳಿಸಲಾಗಿದ್ದು, ಜಿಲ್ಲಾವಾರು ವಿವರವನ್ನು ಅನುಬಂಧ-2ರಲ್ಲಿ ಒದಗಿಸಿದೆ. |
| ಇ | ಕಳೆದ ಮೂರು ವರ್ಷಗಳಲ್ಲಿ ಬಾಲಕಾರ್ಮಿಕರ ಸಮೀಕ್ಷೆ ಮತ್ತು ಪತ್ತೆಗಾಗಿ ಸರಕಾರದಿಂದ ಬಿಡುಗಡೆ ಮಾಡಲಾಗಿರುವ ಅನುದಾನವೆಷ್ಟು; (ಜಿಲ್ಲಾವಾರು ವಿವರ ನೀಡುವುದು) | ಕಳೆದ ಮೂರು ವರ್ಷಗಳಲ್ಲಿ ಬಾಲಕಾರ್ಮಿಕರ ಸಮೀಕ್ಷೆ, ಬಾಲ್ಯಾವಸ್ಥೆಯ ಹಾಗೂ ಕಿಶೋರಾವಸ್ಥೆಯ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986ರ ಪ್ರಾವದಾನಗಳ ಅನುಷ್ಠಾನಕ್ಕೆ, ಮಾಹಿತಿ-ಸಂವಹನ ಮತ್ತು ಶಿಕ್ಷಣ(ಐಸಿಇ) ಚಟುವಟಿಕೆಗಳ ಆಯೋಜನೆಗೆ ಹಾಗೂ ಆಡಳಿತಾತ್ಮಕ ವೆಚ್ಚಗಳಿಗೆ ಸರ್ಕಾರದಿಂದ ಅನುದಾನ ಬಿಡುಗಡೆಯಾಗುತ್ತಿದ್ದು, ಕಳೆದ ಮೂರು ವರ್ಷಗಳಲ್ಲಿ ಸರ್ಕಾರದಿಂದ ಬಿಡುಗಡೆಯಾದ ಅನುದಾನದ ವಿವರಗಳು ಈ ಕೆಳಕಂಡಂತೆ ಇರುತ್ತದೆ; |

| ಕ್ರ.ಸಂ | ವರ್ಷ | ಬಿಡುಗಡೆಯಾದ ಅನುದಾನ (ಲಕ್ಷಗಳಲ್ಲಿ) | ಷರಾ |
|---|---|---|---|
| 1 | 2018-19 | 500.00 | ಸಮೀಕ್ಷೆ ನಡೆಸಿರುವುದಿಲ್ಲ |
| 2 | 2019-20 | 400.00 | ಸಮೀಕ್ಷೆ ನಡೆಸಿರುವುದಿಲ್ಲ |
| 3 | 2020-21 | 400.00 | ಸಮೀಕ್ಷೆ ನಡೆಸಿರುವುದಿಲ್ಲ |
| 4 | 2021-22 | 400.00 | ಸಮೀಕ್ಷೆಗೆ ಅನುದಾನ ಬಳಸಿಕೊಳ್ಳಲಾಗುತ್ತಿದೆ. |

ಜಿಲ್ಲೆಗಳಿಗೆ ಬಿಡುಗಡೆ ಮಾಡಿದ ವರ್ಷವಾರು ಅನುದಾನದ ಜಿಲ್ಲಾವಾರು ವಿವರವನ್ನು ಅನುಬಂಧ-3ರಲ್ಲಿ ಒದಗಿಸಿದೆ.